**ಕರ್ನಾಟಕ ಸರ್ಕಾರದ ನಡವಳಿ**

ವಿಷಯ: ಶ್ರೀ ಎಂ.ಹೆಚ್. ಬಳ್ಳಾರಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸೊನ್ನ ಗ್ರಾಮ ಪಂಚಾಯತ್, ಬೀಳಗಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರ ವಿರುದ್ಧ ಲೋಕಾಯುಕ್ತ ವಿಚಾರಣೆ– ಅಂತಿಮ ಆದೇಶ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 88 ಗ್ರಾಪಂಕಾ 2018, ದಿನಾಂಕ: 08.03.2018.
2. ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಬೆಳಗಾವಿ ಪೀಠದ ಅರ್ಜಿ ಸಂಖ್ಯೆ:1385/2019, ಆದೇಶ ದಿನಾಂಕ: 18.06.2021.
3. ಅಪರ ನಿಬಂಧಕರು ವಿಚಾರಣೆಗಳು–9, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತ ರವರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: UPLOK-1 / DE / 153 / 2018/ARE-9, ದಿನಾಂಕ: 30.10.2021.
4. ಮಾನ್ಯ ಉಪಲೋಕಾಯುಕ್ತ, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: UPLOK-1 / DE / 153 / 2018/ARE-9, ದಿನಾಂಕ: 02.11.2021.

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ ಶ್ರೀ ಎಂ.ಹೆಚ್. ಬಳ್ಳಾರಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸೊನ್ನ ಗ್ರಾಮ ಪಂಚಾಯತ್, ಬೀಳಗಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರ ವಿರುದ್ಧದ ಈ ಕೆಳಕಂಡ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14–A ರಡಿ ಇಲಾಖಾ ವಿಚಾರಣೆ ನಡೆಸಲು ಮಾನ್ಯ ಉಪಲೋಕಾಯುಕ್ತರಿಗೆ ವಹಿಸಲಾಗಿತ್ತು.

**"ದೋಷಾರೋಪಣೆ":**

" That you- DGO as PDO, Sonna Gram Panchayath, sonna, Bilagi Taluk, Bagalokote District allotting house to beneficiary Smt. Jayashri though she is a retired Government employee and not eligible for allotment of house under Ashraya Scheme without verifying the fake income certificate produced by Smt. Jayashri and the benefit has been extended to her.

Thereby, you DGO have failed to maintain absolute integrity and devetion to duty and committed and act which is unbecoming of a Government Servant and thus you are guilty of misconduct under Rule 3(1) (i) to (iii) of KCS (Conduct) Rules 1966."

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ವಿಚಾರಣಾಧಿಕಾರಿಗಳು ತಮ್ಮ ವರದಿಯಲ್ಲಿ ಶ್ರೀ ಎಂ.ಹೆಚ್. ಬಳ್ಳಾರಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸೊನ್ನ ಗ್ರಾಮ ಪಂಚಾಯತ್, ಬೀಳಗಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರು ಮಾನ್ಯ ಕರ್ನಾಟಕ ಆಡಳಿತ ನ್ಯಾಯ ಮಂಡಳಿ, ಬೆಳಗಾವಿ ಪೀಠದಲ್ಲಿ ಅರ್ಜಿ ಸಂಖ್ಯೆ: 1385/2019 ರಲ್ಲಿ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 88 ಗ್ರಾಪಂಕಾ 2018, ದಿನಾಂಕ: 08.03.2018 ಮತ್ತು ಮಾನ್ಯ ಉಪಲೋಕಾಯುಕ್ತರಿಂದ ಜಾರಿಯಾಗಿದ್ದ ಅನುಬಂಧ 1 ಮತ್ತು 4 ರನ್ನು ಪ್ರಶ್ನಿಸಿ ದಾವೆ ಹೂಡಿದ್ದು, ಮಾನ್ಯ ನ್ಯಾಯಾಲಯವು ಸದರಿ ಅರ್ಜಿಯನ್ನು ಪರಿಶೀಲಿಸಿ, ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 88 ಗ್ರಾಪಂಕಾ 2018, ದಿನಾಂಕ:08.03.2018 ಮತ್ತು ಮಾನ್ಯ ಉಪಲೋಕಾಯುಕ್ತರಿಂದ ಜಾರಿಯಾಗಿದ್ದ ಅನುಬಂಧ 1 ಮತ್ತು 4 ರನ್ನು ರದ್ದುಪಡಿಸಿ ಆದೇಶಿಸಿದ್ದು, ಮಾನ್ಯ ನ್ಯಾಯಾಲದ ಆದೇಶ ವಿರುದ್ದ ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸಲು ಸೂಕ್ತವಲ್ಲವೆಂದು ಅಭಿಪ್ರಾಯಪಟ್ಟು,

ಶ್ರೀ ಎಂ.ಹೆಚ್. ಬಳ್ಳಾರಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸೊನ್ನ ಗ್ರಾಮ ಪಂಚಾಯತ್, ಬೀಳಗಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರ ಮೇಲಿನ ಆರೋಪಕ್ಕೆ ಸಂಬಂಧಿಸಿದ ಪ್ರಕರಣವನ್ನು ಮುಕ್ತಾಯಗೊಳಿಸಬಹುದಾಗಿದೆ ನಿರ್ಣಯಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ಉಪಲೋಕಾಯುಕ್ತರು ವಿಚಾರಣಾಧಿಕಾರಿಗಳ ವರದಿಯನ್ನು ಅಂಗೀಕರಿಸಿ, ಶ್ರೀ ಎಂ.ಹೆಚ್.ಬಳ್ಳಾರಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸೊನ್ನ ಗ್ರಾಮ ಪಂಚಾಯತ್, ಬೀಳಗಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರ ಮೇಲಿನ ಆರೋಪಕ್ಕೆ ಸಂಬಂಧಿಸಿದ ಪ್ರಕರಣವನ್ನು ಮುಕ್ತಗೊಳಿಸಲು ಶಿಫಾರಸ್ಸು ಮಾಡಿರುತ್ತಾರೆ.

ಮೇಲ್ಕಂಡ ಅಂಶಗಳನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಅಪರ ನಿಬಂಧಕರು-9, ಕರ್ನಾಟಕ ಲೋಕಾಯುಕ್ತ, ಬೆಂಗಳೂರು, ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ, ಮಾನ್ಯ ಉಪಲೋಕಾಯುಕ್ತರ ಶಿಫಾರಸ್ಸು ಹಾಗೂ ದಾಖಲೆಗಳು ಮತ್ತು ಸಾಕ್ಷ್ಯಾಧ್ಯಾರಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಶ್ರೀ ಎಂ.ಹೆಚ್. ಬಳ್ಳಾರಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸೊನ್ನ ಗ್ರಾಮ ಪಂಚಾಯತ್, ಬೀಳಗಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರ ಮೇಲಿನ ಆರೋಪಕ್ಕೆ ಸಂಬಂಧಿಸಿದ ಪ್ರಕರಣವನ್ನು ಮುಕ್ತಗೊಳಿಸಲು ನಿರ್ಣಯಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 150 ಗ್ರಾಪಂಕಾ 2021, ಬೆಂಗಳೂರು, ದಿನಾಂಕ: 12.04.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಎಂ.ಹೆಚ್ ಬಳ್ಳಾರಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸೊನ್ನ ಗ್ರಾಮ ಪಂಚಾಯತ್, ಬೀಳಗಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ ಇವರ ಮೇಲಿನ ಆರೋಪಕ್ಕೆ ಸಂಬಂಧಿಸಿದ ಪ್ರಕರಣವನ್ನು ಮುಕ್ತಾಯಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

12/4/22

(ರಾಜು ಎಂ.ಎಂ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರವರು ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
3. ಅಪರ ನಿಬಂಧಕರು, ವಿಚಾರಣೆಗಳು-9, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬಾಗಲಕೋಟೆ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ ಬೀಳಗಿ, ಬಾಗಲಕೋಟೆ ಜಿಲ್ಲೆ
   ಶ್ರೀ ಎಂ.ಹೆಚ್ ಬಳ್ಳಾರಿ, ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಸೊನ್ನ ಗ್ರಾಮ ಪಂಚಾಯತ್, ಬೀಳಗಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ **(ಇವರಿಗೆ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್ ಬೀಳಗಿ, ಬಾಗಲಕೋಟೆ ಜಿಲ್ಲೆ ಇವರ ಮುಖಾಂತರ)**
6. ಗಣಕ ಕೋಶ.
7. ಶಾಖಾ ರಕ್ಷಾಕಡತ/ಹೆಚ್ಚುವರಿ ಪ್ರತಿ.